## ಹಿರಿಯ ತಾಯಂದಿರಿಗೆ ಗೌರವ ಪುರಸ್ಕಾರ

# ಸಮೃದ್ಧ ಸಮಾಜಕ್ಕೆ ಹಿರಿಯರ ಮಾರ್ಗದರ್ಶನ ಅಗತ್ಯ: ಡಾ.ಅನ್ನದಾನೀಶ್ವರಶ್ರೀ



ಮುಂಡರಗಿ, ಎ. 27. ಸದೃಢ ರಾಷ್ಟ್ರ ನಿರ್ಮಾಣಕ್ಕೆ ಹಿರಿಯರ ಸೂಕ್ತ ಸಲಹೆ ಮಾರ್ಗದರ್ಶನ ತುಂಬಾ ಅವಶ್ಯವಾಗಿದೆ ಎಂದು, ಜಗದ್ಗುರು ಡಾ. ನಾಡೋಜ ಅನ್ನದಾನೀಶ್ವರ ಶ್ರೀಗಳು ಹೇಳಿದರು.

ಸಾನಿಧ್ಯ ವಹಿಸಿ ಹಿರಿಯ ತಾಯಂದಿರನ್ನು ಗೌರವಿಸಿ ಮಾತನಾಡಿದ ಅವರು, ನಮ್ಮ ನಾಡಿನಲ್ಲಿ ಹಿರಿಯರಿಗೆ ಅತ್ಯಂತ ಅಪಾರ ಗೌರವವಿದೆ ಅವರನ್ನು ಸದಾಕಾಲ ಗೌರವಿಸಬೇಕು. ಅಂತಹ ಕೆಲಸವನ್ನು ಅಕ್ಕನ ಬಳಗದವರು ಅವ್ವ ಸೇವಾ ಟ್ರಸ್ಟ್‌ನವರು ಮಾಡುತ್ತಿರುವುದು ಅತ್ಯಂತ ಶ್ಲಾಘನೀಯ ಕಾರ್ಯ ಎಂದು ಹೇಳಿದರು.

ಇಲ್ಲಿಯ ಜಗದ್ಗುರು ಅನ್ನದಾನೀಶ್ವರ ಸಂಸ್ಥಾನ ಮಠದಲ್ಲಿ ಹುಬ್ಬಳ್ಳಿಯ ಅವ್ವ ಸೇವಾ ಟ್ರಸ್ಟ ಗುರವ್ವ ಶಿವಲಿಂಗಪ್ಪ ಹೊರಟ್ಟಿಯವರ ಸ್ಮರಣೆಗಾಗಿ ಸ್ಥಾಪಿಸಿದ, ದತ್ತಿನಿಧಿ ಕಾರ್ಯಕ್ರಮದಲ್ಲಿ ಜಂಗಮ ಪುಂಗವ ಅಲ್ಲಮ ಪ್ರಭುಗಳ, ಅಕ್ಕಮಹಾದೇವಿ ಜಯಂತಿ ಮತ್ತು ಶ್ರೀಮಠದ 9ನೇ ಪೀಠಾಧಿಪತಿಗಳ 57ನೇ ಪುಣ್ಯಸ್ಮರಣೋತ್ಸವ ಕಾರ್ಯಕ್ರಮದಲ್ಲಿ ಸಾನಿಧ್ಯ ವಹಿಸಿ, ಕಳೆದ ಯು.ಪಿ.ಎಸ್.ಸಿ. ಪರೀಕ್ಷೆಯಲ್ಲಿ ದೇಶಕ್ಕೆ 101ನೇ ಸ್ಥಾನ ಗಳಿಸಿದ ಹಾಗೂ ರಾಜ್ಯಕ್ಕೆ 2ನೇ ಸ್ಥಾನ ಪಡೆದ ಯಲಬುರ್ಗಾ ತಾಲೂಕಿನ ಮುಧೋಳ ಗ್ರಾಮದ, ಸೌಭಾಗ್ಯ ಬೀಳಗಿಮಠ ಹಾಗೂ ಹರಪನಹಳ್ಳಿ ಶಾಸಕಿ ಲತಾ ಮಲ್ಲಿಕಾರ್ಜುನ ಅವರು ಕಳೆದ ವಿಧಾನ ಸಭೆಯ ಚುನಾವಣೆಯಲ್ಲಿ ಪಕ್ಷೇತರ ಅಭ್ಯರ್ಥಿಯಾಗಿ, ಗೆಲ್ಲುವ ಮೂಲಕ ದಾಖಲೆ ನಿರ್ಮಿಸಿದ್ದಾರೆ. ಈರ್ವರನ್ನು ಸನ್ಮಾನಿಸಿ ಮಾತನಾಡಿ ಒಬ್ಬ ತಾಯಿ ಮನೆಯಲ್ಲಿದ್ದರೆ ನೂರು ಶಾಲೆಗಳನ್ನು ತೆರೆದಷ್ಟು ಮಕ್ಕಳು ಸಂಸ್ಕಾರವಂತರಾಗುತ್ತಾರೆ. ತಾಯಿ ದೇವರಾಗಬಹುದು. ಆದರೆ ದೇವರು ತಾಯಿಯಾಗಲು ಸಾಧ್ಯವಿಲ್ಲ, ಈ ಸ್ಥಾನಕ್ಕೆ ಯಾರೂ ಸಮನಲ್ಲ, ನಮ್ಮನ್ನು ಹೊತ್ತು, ಹೆತ್ತು, ಸಾಕಿ, ಸಲುಹಿ ದೊಡ್ಡವರನ್ನಾಗಿ ಮಾಡಿದ ನಮ್ಮ ತಂದೆ ತಾಯಿಯವರನ್ನು ನೋಯಿಸದೇ ಅವರ ಕೊನೆಗಾಲದಲ್ಲಿ ಪ್ರೀತಿ, ವಿಶ್ವಾಸ, ಗೌರವ ಆದರಾತಿಥ್ಯಗಳಿಂದ ನೋಡಿಕೊಳ್ಳಬೇಕು. ಮಹಿಳೆಯರು ಸಬಲರಾದರೆ ಸದೃಢ ದೇಶವನ್ನು ಕಟ್ಟಲು ಸಾಧ್ಯವಾಗುತ್ತದೆ. ಅಂತಹ ಸಾಧನೆ ಮಾಡಿದ ಸೌಭಾಗ್ಯ ಬೀಳಗಿಮಠ ಹಾಗೂ ಲತಾ ಮಲ್ಲಿಕಾರ್ಜುನ ಪ್ರತಿಯೊಬ್ಬ ಹೆಣ್ಣುಮಕ್ಕಳಿಗೂ ಮಾದರಿಯಾಗಿದ್ದಾರೆ. ಇವರ ಸಾಧನೆಯನ್ನು ಗೌರವಿಸಲು ಅವ್ವ ಸೇವಾ ಟ್ರಸ್ಟ ಬಳಗಕ್ಕೆ ಹೆಮ್ಮೆ ಎನಿಸುತ್ತದೆ ಎಂದು ಹೇಳಿದರು.

ಸಭಾಪತಿ ಬಸವರಾಜ್ ಹೊರಟ್ಟಿ ಅವರು ಮಾತನಾಡಿ, ಹೆತ್ತವರಿಗೆ ಹಿರಿಯರಿಗೆ ಎಂದು ನೋವಾಗದಂತೆ ನೋಡಿಕೊಳ್ಳಬೇಕು. ಅವರು ನಮ್ಮ ಜೀವಾಳ ನಮ್ಮ ಬದುಕಿಗೆ ಸಾಕಷ್ಟು ತ್ಯಾಗವನ್ನು ಮಾಡಿರುತ್ತಾರೆ. ಅವರ ಇಳಿ ವಯಸ್ಸಿನಲ್ಲಿ ಮನೆಯಲ್ಲಿ ಇಟ್ಟುಕೊಂಡು ಅತ್ಯಂತ ಪ್ರೀತಿ ಗೌರವದಿಂದ ನೋಡಿಕೊಳ್ಳಬೇಕು. ಇಂತಹ ಸಂಸ್ಕೃತಿಯನ್ನು ಮಕ್ಕಳಿಗೆ ಬಾಲ್ಯದಿಂದಲೇ ಕಲಿಸಬೇಕು. ವೃದ್ಧಾಶ್ರಮ ಸಂಸ್ಕೃತಿ ದೂರಾಗಬೇಕು ಅಂದಾಗ ಸಮೃದ್ಧ ಸಮಾಜ ಕಟ್ಟಲು ಸಾಧ್ಯ ಎಂದು ಹೇಳಿದರು. ಇಂತಹ ಕಾರ್ಯಗಳನ್ನು ಶ್ರೀಮಠ ಕಳೆದ ಶತಮಾನಗಳಿಂದ ಮಾಡುತ್ತ ಬಂದಿರುವುದು ಅತ್ಯಂತ ಹೆಮ್ಮೆಯ ಸಂಗತಿ. 12ಕ್ಕೂ ಹೆಚ್ಚು ಹಿರಿಯ ತಾಯಂದಿರಿಗೆ ಇದೇ ಸಂದರ್ಭದಲ್ಲಿ ಗೌರವಿಸಿ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಹರಪನಹಳ್ಳಿ ಶಾಸಕಿ ಲತಾ ಮಲ್ಲಿಕಾರ್ಜುನ, ಶಶಿ ಸಾಲಿ, ನಿವೃತ್ತ ಪ್ರಾ. ಕರಿಭರಮಗೌಡರ, ಡಾ.ಬಸವರಾಜ ಧಾರವಾಡ ಮುಂತಾದವರು ಮಾತನಾಡಿದರು. ಕಾರ್ಯಕ್ರಮದಲ್ಲಿ ಅಳವಂಡಿ ಮರುಳಾರಾಧ್ಯ ಶಿವಾಚಾರ್ಯ ಸ್ವಾಮೀಜಿ, ಮಹಾಲಿಂಗ ಸ್ವಾಮೀಜಿ, ಕರಬಸಪ್ಪ ಹಂಚಿನಾಳ, ಆರ್.ಬಿ. ಡಂಬಳಮಠ, ವೀರನಗೌಡ ಗುಡದಪ್ಪನವರ, ಆರ್.ಎಲ್.ಪೊಲೀಸ್ ಪಾಟೀಲ, ಎಸ್.ಎಂ. ಅಗಡಿ, ಎಸ್.ಎಸ್.ಗಡ್ಡದ, ಎಸ್.ಪಿ.ನಿಂಬಿಮಠ, ಎಮ್.ಎಸ್.ಪೂಜಾರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಡಾ.ಬಿ.ಜಿ.ಜವಳಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಎಸ್.ಎಸ್.ಇನಾಮತಿ ನಿರೂಪಿಸಿದರು.

# ಹಿರಿಯ ತಾಯಂದಿರಿಗೆ ಗೌರವ ಪುರಸ್ಕಾರ

## ಸಮೃದ್ಧ ಸಮಾಜಕ್ಕೆ ಹಿರಿಯರ ಮಾರ್ಗದರ್ಶನ ಅಗತ್ಯ–ಡಾ. ಅನ್ನದಾನೀಶ್ವರ ಶ್ರೀಗಳು



ಮುಂಡರಗಿ: ಸದೃಢ ರಾಷ್ಟ್ರ ನಿರ್ಮಾಣಕ್ಕೆ ಹಿರಿಯರ ಸೂಕ್ತ ಸಲಹೆ ಮಾರ್ಗದರ್ಶನ ತುಂಬಾ ಅವಶ್ಯವಾಗಿದೆ ಎಂದು ಜಗದ್ಗುರು ಡಾ. ನಾಡೋಜ ಅನ್ನದಾನೀಶ್ವರ ಶ್ರೀಗಳು ಹೇಳಿದರು. ಸಾನಿಧ್ಯ ವಹಿಸಿ ಹಿರಿಯ ತಾಯಂದಿರನ್ನು ಗೌರವಿಸಿ ಮಾತನಾಡಿದ ಅವರು ನಮ್ಮ ನಾಡಿನಲ್ಲಿ ಹಿರಿಯರಿಗೆ ಅತ್ಯಂತ ಅಪಾರ ಗೌರವವಿದೆ ಅವರನ್ನು ಸದಾಕಾಲ ಗೌರವಿಸಬೇಕು. ಅಂತಹ ಕೆಲಸವನ್ನು ಅಕ್ಕನ ಬಳಗದವರು ಅವ್ವ ಸೇವಾ ಟ್ರಸ್ಟ್ ನವರು ಮಾಡುತ್ತಿರುವುದು ಅತ್ಯಂತ ಶ್ಲಾಘನೀಯ ಕಾರ್ಯ ಎಂದು ಹೇಳಿದರು.

ಅವರು ಇಲ್ಲಿಯ ಜಗದ್ಗುರು ಅನ್ನದಾನೀಶ್ವರ ಸಂಸ್ಥಾನ ಮಠದಲ್ಲಿ ಹುಬ್ಬಳ್ಳಿಯ ಅವ್ವ ಸೇವಾ ಟ್ರಸ್ಟ ಗುರವ್ವ ಶಿವಲಿಂಗಪ್ಪ ಹೊರಟ್ಟಿಯವರ ಸ್ಮರಣೆಗಾಗಿ ಸ್ಥಾಪಿಸಿದ ದತ್ತಿನಿಧಿ ಕಾರ್ಯಕ್ರಮದಲ್ಲಿ ಜಂಗಮ ಪುಂಗವ ಅಲ್ಲಮ ಪ್ರಭುಗಳ, ಅಕ್ಕಮಹಾದೇವಿ ಜಯಂತಿ ಮತ್ತು ಶ್ರೀಮಠದ 9ನೇ ಪೀಠಾಧಿಪತಿಗಳ 57ನೇ ಪುಣ್ಯ ಸ್ಮರಣೋತ್ಸವ ಕಾರ್ಯಕ್ರಮದಲ್ಲಿ ಸಾನಿಧ್ಯ ವಹಿಸಿ ಕಳೆದ ಯು.ಪಿ.ಎಸ್.ಸಿ. ಪರೀಕ್ಷೆಯಲ್ಲಿ ದೇಶಕ್ಕೆ 101ನೇ ಸ್ಥಾನ ಗಳಿಸಿದ ಹಾಗೂ ರಾಜ್ಯಕ್ಕೆ 2ನೇ ಸ್ಥಾನ ಪಡೆದ ಯಲಬುರ್ಗಾ ತಾಲೂಕಿನ ಮುಧೋಳ ಗ್ರಾಮದ ಸೌಭಾಗ್ಯ ಬೀಳಗಿಮಠ ಹಾಗೂ ಹರಪನಹಳ್ಳಿ ಶಾಸಕಿ ಲತಾ ಮಲ್ಲಿಕಾರ್ಜುನ ಅವರು ಕಳೆದ ವಿಧಾನ ಸಭೆಯ ಚುನಾವಣೆಯಲ್ಲಿ ಪಕ್ಷೇತರ ಅಭ್ಯರ್ಥಿಯಾಗಿ ಗೆಲ್ಲುವ ಮೂಲಕ ದಾಖಲೆ ನಿರ್ಮಿಸಿದ್ದಾರೆ. ಈರ್ವರನ್ನು ಸನ್ಮಾನಿಸಿ ಮಾತನಾಡಿ ಒಬ್ಬ ತಾಯಿ ಮನೆಯಲ್ಲಿದ್ದರೆ ನೂರು ಶಾಲೆಗಳನ್ನು ತೆರೆದಷ್ಟು ಮಕ್ಕಳು ಸಂಸ್ಕಾರವಂತರಾಗುತ್ತಾರೆ. ತಾಯಿ ದೇವರಾಗಬಹುದು. ಆದರೆ ದೇವರು ತಾಯಿಯಾಗಲು ಸಾಧ್ಯವಿಲ್ಲ. ಈ ಸ್ಥಾನಕ್ಕೆ ಯಾರೂ ಸಮನಲ್ಲ. ನಮ್ಮನ್ನು ಹೊತ್ತು, ಹೆತ್ತು, ಸಾಕಿ, ಸಲುಹಿ ದೊಡ್ಡವರನ್ನಾಗಿ ಮಾಡಿದ ನಮ್ಮ ತಂದೆ ತಾಯಿಯವರನ್ನು ನೋಯಿಸದೇ ಅವರ

ಕೊನೆಗಾಲದಲ್ಲಿ ಪ್ರೀತಿ, ವಿಶ್ವಾಸ, ಗೌರವ ಆದರಾತಿಥ್ಯಗಳಿಂದ ನೋಡಿಕೊಳ್ಳಬೇಕು. ಮಹಿಳೆಯರು ಸಬಲರಾದರೆ ಸದೃಢ ದೇಶವನ್ನು ಕಟ್ಟಲು ಸಾಧ್ಯವಾಗುತ್ತದೆ. ಅಂತಹ ಸಾಧನೆ ಮಾಡಿದ ಸೌಭಾಗ್ಯ ಬೀಳಗಿಮಠ ಹಾಗೂ ಲತಾ ಮಲ್ಲಿಕಾರ್ಜುನ ಪ್ರತಿಯೊಬ್ಬ ಹೆಣ್ಣುಮಕ್ಕಳಿಗೂ ಮಾದರಿಯಾಗಿದ್ದಾರೆ. ಇವರ ಸಾಧನೆಯನ್ನು ಗೌರವಿಸಲು ಅವ್ವ ಸೇವಾ ಟ್ರಸ್ಟ ಬಳಗಕ್ಕೆ ಹೆಮ್ಮೆ ಎನಿಸುತ್ತದೆ ಎಂದು ಹೇಳಿದರು.

ಸಭಾಪತಿ ಬಸವರಾಜ್ ಹೊರಟ್ಟಿ ಅವರು ಮಾತನಾಡಿ ಹೆತ್ತವರಿಗೆ ಹಿರಿಯರಿಗೆ ಎಂದು ನೋವಾಗದಂತೆ ನೋಡಿಕೊಳ್ಳಬೇಕು ಅವರು ನಮ್ಮ ಜೀವಾಳ ನಮ್ಮ ಬದುಕಿಗೆ ಸಾಕಷ್ಟು ತ್ಯಾಗವನ್ನ ಮಾಡಿರುತ್ತಾರೆ. ಅವರ ಇಳಿ ವಯಸ್ಸಿನಲ್ಲಿ ಮನೆಯಲ್ಲಿ ಇಟ್ಟುಕೊಂಡು ಅತ್ಯಂತ ಪ್ರೀತಿ ಗೌರವದಿಂದ ನೋಡಿಕೊಳ್ಳಬೇಕು. ಇಂತಹ ಸಂಸ್ಕೃತಿಯನ್ನು ಮಕ್ಕಳಿಗೆ ಬಾಲ್ಯದಿಂದಲೇ ಕಲಿಸಬೇಕು. ವೃದ್ಧಾಶ್ರಮ ಸಂಸ್ಕೃತಿ ದೂರಾಗಬೇಕು ಅಂದಾಗ ಸಮೃದ್ಧ ಸಮಾಜ ಕಟ್ಟಲು ಸಾಧ್ಯ ಎಂದು ಹೇಳಿದರು. ಇಂತಹ ಕಾರ್ಯಗಳನ್ನು ಶ್ರೀಮಠ ಕಳೆದ ಶತಮಾನಗಳಿಂದ ಮಾಡುತ್ತ ಬಂದಿರುವುದು ಅತ್ಯಂತ ಹೆಮ್ಮೆಯ ಸಂಗತಿ. 12ಕ್ಕೂ ಹೆಚ್ಚು ಹಿರಿಯ ತಾಯಂದಿರಿಗೆ ಇದೇ ಸಂದರ್ಭದಲ್ಲಿ ಗೌರವಿಸಿ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಹರಪನಹಳ್ಳಿ ಶಾಸಕಿ ಲತಾ ಮಲ್ಲಿಕಾರ್ಜುನ, ಶಶಿ ಸಾಲಿ, ನಿವೃತ್ತ ಪ್ರಾ. ಕರಿಭರಮಗೌಡರ, ಡಾ.ಬಸವರಾಜ ಧಾರವಾಡ ಮುಂತಾದವರು ಮಾತನಾಡಿದರು. ಕಾರ್ಯಕ್ರಮದಲ್ಲಿ ಅಳವಂಡಿ ಮರುಳಾರಾಧ್ಯ ಶಿವಾಚಾರ್ಯ ಸ್ವಾಮೀಜಿ, ಮಹಾಲಿಂಗ ಸ್ವಾಮೀಜಿ, ಕರಬಸಪ್ಪ ಹಂಚಿನಾಳ, ಆರ್.ಬಿ.ಡಂಬಳಮಠ, ವೀರನಗೌಡ ಗುಡದಪ್ಪನವರ, ಆರ್.ಎಲ್.ಪೋಲಿಸ್‌ಪಾಟೀಲ, ಎಸ್.ಎಂ. ಅಗಡಿ, ಎಸ್.ಎಸ್.ಗಡ್ಡದ, ಎಸ್.ಪಿ.ನಿಂಬಿಮಠ, ಎಮ್.ಎಸ್.ಪೂಜಾರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಡಾ.ಬಿ.ಜಿ.ಜವಳಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಎಸ್.ಎಸ್.ಇನಾಮತಿ ನಿರೂಪಿಸಿದರು.

# ಅವ್ವ ಸೇವಾ ಟ್ರಸ್ಟನ ಸನ್ಮಾನ ತಾಯಿ ಪ್ರೀತಿ ಸಿಕ್ಕಷ್ಟೆ ಖುಷಿಯಾಗಿದೆ

**–ಶಾಸಕಿ ಲತಾ ಮಲ್ಲಿಕಾರ್ಜುನ**




ಮುಂಡರಗಿ : ಮಹಿಳೆಯರಲ್ಲಿ ಬೌದ್ಧಿಕ, ರಾಜಕೀಯ, ಸಾಮಾಜಿಕ, ಆರ್ಥಿಕ ಬಲವನ್ನು ಹೆಚ್ಚಿಸುವುದಕ್ಕೆ ಸಂಘ ಸಂಸ್ಥೆಗಳಿಂದ, ಸರ್ವಧರ್ಮಗಳ ಸಮಾಜಗಳಿಂದ ನೀಡುವ ಸಹಕಾರ ಗೌರವ ಸನ್ಮಾನಗಳ ಪಾತ್ರ ಸಾಕಷ್ಟು ಪರಿಣಾಮ ಬೀರುತ್ತದೆ ಇಂದು ಅವ್ವ ಸೇವಾ ಟ್ರಸ್ಟನವರು ನೀಡಿದ ಸನ್ಮಾನದಿಂದ ತಾಯಿ ಪ್ರೀತಿ ಸಿಕ್ಕಷ್ಟೇ ಖುಷಿಯಾಗಿದೆ ಎಂದು ಹರಪನಹಳ್ಳಿ ತಾಲೂಕಿನ ಪಕ್ಷೇತರ ಶಾಸಕಿ ಶ್ರೀಮತಿ ಲತಾ ಮಲ್ಲಿಕಾರ್ಜುನ ಅಭಿಪ್ರಾಯಪಟ್ಟರು.

ಅವರು ಇಲ್ಲಿಯ ಜಗದ್ಗುರು ಅನ್ನದಾನೀಶ್ವರ ಸಂಸ್ಥಾನ ಮಠದಲ್ಲಿ ಹುಬ್ಬಳ್ಳಿಯ ಅವ್ವ ಸೇವಾ ಟ್ರಸ್ಟ ಗುರವ್ವ ಶಿವಲಿಂಗಪ್ಪ ಹೊರಟ್ಟಿಯವರ ಸ್ಮರಣೆಗಾಗಿ ಸ್ಥಾಪಿಸಿದ ದತ್ತಿನಿಧಿ ಕಾರ್ಯಕ್ರಮದಲ್ಲಿ ಜಂಗಮ ಪುಂಗವ ಅಲ್ಲಮ ಪ್ರಭುಗಳ, ಅಕ್ಕಮಹಾದೇವಿ ಜಯಂತಿ ಮತ್ತು ಶ್ರೀಮಠದ 9ನೇ ಪೀಠಾಧಿಪತಿಗಳ 57ನೇ ಪುಣ್ಯ ಸ್ಮರಣೋತ್ಸವ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಹುಬ್ಬಳ್ಳಿಯ ಅವ್ವ ಸೇವಾ ಟ್ರಸ್ಟ, ಅನ್ನದಾನೀಶ್ವರ ಮಠದವತಿಯಿಂದ ಹಾಗೂ ಅಕ್ಕನಬಳಗದವರು ನೀಡಿದ ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು ಮಹಿಳೆ ಸಾಕಷ್ಟು ಸಬಲೀಕರಣ ಸಶಕ್ತತೆ ಹೊಂದಬೇಕಾದರೆ ಎಲ್ಲ ಸಮುದಾಯದ ಪ್ರೀತಿ ವಿಶ್ವಾಸ ಬೇಕಾಗುತ್ತದೆ ಅಂದಾಗ ಅವಳಲ್ಲಿ ಮುನ್ನುಗ್ಗುವ ಛಲ, ಆತ್ಮ ವಿಶ್ವಾಸ, ಸಾಮರ್ಥ್ಯ ಹೆಚ್ಚಾಗುತ್ತದೆ. ಹಾಗೂ ಸ್ವಯಂ ನಿರ್ಧಾರ ತೆಗೆದುಕೊಳ್ಳುವಲ್ಲಿಯೂ ಸಹಜವಾಗಿ ಮುಂದಾಗುತ್ತಾಳೆ. ನಾನು ಎರಡು ರಾಷ್ಟ್ರೀಯ ಪಕ್ಷಗಳ ಮಧ್ಯೆ ಕಳೆದ ವಿಧಾನಸಭೆ ಚುನಾವಣೆಯಲ್ಲಿ ಪಕ್ಷೇತರಳಾಗಿ ಗೆಲ್ಲಲು ಹರಪನಹಳ್ಳಿಯ ಜನ ತೋರಿದ ಪ್ರೀತಿ ವಿಶ್ವಾಸವೇ ಸಾಕ್ಷಿ. ಇವತ್ತಿನ ರಾಜಕೀಯ ವ್ಯವಸ್ಥೆಯಲ್ಲಿ ಮಹಿಳೆಯೊಬ್ಬಳು ಪಕ್ಷೇತರಳಾಗಿ ಗೆಲ್ಲುವುದು ಎಂದರೆ ನೀವೆ ಊಹೆ ಮಾಡಿ ಇದೆಲ್ಲ ಆಗಿದ್ದು ಹೆತ್ತವರ ಪ್ರೀತಿ, ಸಮಾಜ ತೋರಿದ ಸಹಕಾರದಿಂದ ಮಾತ್ರ ಸಾದ್ಯವಾಯಿತು ಎಂದು ಅತ್ಯಂತ ವಿನಮ್ರವಾಗಿ ಹೇಳಿದರು.